# ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:46:ಗ್ರಾವಿಯೋ:2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 20.09.2016

## ಸುತ್ತೋಲೆ

ವಿಷಯ: ಗ್ರಾಮ ವಿಕಾಸ ಯೋಜನೆಯಡಿ ನಿರ್ಮಿಸಲಾಗುವ ಸಾಂಸ್ಕೃತಿಕ ಕೇಂದ್ರಗಳಿಗೆ ಸ್ಥಳೀಯ ಸಾಹಿತಿ / ಗಣ್ಯ ವ್ಯಕ್ತಿಗಳ ಹೆಸರಿನೊಂದಿಗೆ ಗುರುತಿಸುವ ಕುರಿತು.

ಉಲ್ಲೇಖ: ಗ್ರಾಮ ವಿಕಾಸ ಯೋಜನೆ ಮಾರ್ಗಸೂಚಿ.

***

ಗ್ರಾಮ ವಿಕಾಸ ಯೋಜನೆಯಡಿ ಮುಖ್ಯ ಮಂತ್ರಿಗಳ 21 ಅಂಶಗಳ ಕಾರ್ಯಕ್ರಮಗಳನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಬೇಕಾಗಿದ್ದು ಆಯ್ಕೆಯಾದ ಗ್ರಾಮಗಳಲ್ಲಿ ಕನಿಷ್ಠ 1 ಸಾಂಸ್ಕೃತಿಕ ಕೇಂದ್ರದ ಸ್ಥಾಪನೆಗೆ ಆದ್ಯತೆ ನೀಡಿ ಸ್ಥಳೀಯವಾಗಿ ಸಾಂಸ್ಕೃತಿಕ ಚಟುವಟಿಕೆಗಳಿಗೆ ಉತ್ತೇಜನ ನೀಡಲಾಗಿದೆ.

ಅದರಂತೆ ಗ್ರಾಮ ವಿಕಾಸ ಯೋಜನೆಯ ಮಾರ್ಗಸೂಚಿ ಪುಸ್ತಕದಲ್ಲಿ ಯೋಜನೆಯಡಿ ಆಯ್ಕೆಗೊಂಡ ಗ್ರಾಮಗಳಲ್ಲಿ ಕೈಗೊಳ್ಳಬೇಕಾಗಿರುವ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಪುಟ ಸಂಖ್ಯೆ : 24 ರ ಕಂಡಿಕೆ 4 ರ ಕ್ರ.ಸಂ 2 ರಲ್ಲಿ ಕೆಳಕಂಡಂತೆ ವಿವರಿಸಲಾಗಿದೆ.

| ಕ್ರ.ಸಂ | ಕೈಗೊಳ್ಳಲು ಸೂಚಿಸಿರುವ ಕಾಮಗಾರಿಗಳು | ನಿಗಧಿಪಡಿಸಬೇಕಾದ ಶೆಕಡವಾರು ಮೊತ್ತ |
|---|---|---|
| 2. | ಗ್ರಂಥಾಲಯ / ಸಾಹಿತಿ ಕಲಾವಿಧರ ಸ್ಮಾರಕ / ಸಭಾಭವನ / ಬಯಲು ರಂಗಮಂದಿರ ನಿರ್ಮಾಣ. | 12% |

ಮುಂದುವರೆದು ಪುಟ ಸಂಖ್ಯೆ: 27 ರ ಕಂಡಿಕೆ 5.1.2 ರ ಕ್ರಮ ಸಂಖ್ಯೆ 21 ರಲ್ಲಿ ಮುಖ್ಯಮಂತ್ರಿಗಳ 21 ಅಂಶಗಳ ಕಾರ್ಯಕ್ರಮವನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಬೇಕಾಗಿರುವ ಪಟ್ಟಿಯಲ್ಲಿ ಕೆಳಕಂಡಂತೆ ವಿವರಿಸಲಾಗಿದೆ.

| ಕ್ರ.ಸಂ | ಕಾರ್ಯಕ್ರಮಗಳು | ಅನುಷ್ಠಾನಕ್ಕೆ ತೆಗೆದುಕೊಳ್ಳಲು ನಿಗಧಿಗೊಳಿಸಿದ ಪರಿಮಾಣ |
|---|---|---|
| 21. | ಸಾಂಸ್ಕೃತಿಕ ಕೇಂದ್ರಗಳ ಸ್ಥಾಪನೆ | ಸಾಂಸ್ಕೃತಿಕ ಕ್ಷೇತ್ರದಲ್ಲಿ ಹೆಸರು ಮಾಡಿರುವ ಸ್ಥಳೀಯ ಗಣ್ಯ ವ್ಯಕ್ತಿಗಳ ಹೆಸರಿನಲ್ಲಿ ನಿಗಧಿಯಾದ ಶೇ.12 ರ ಅನುದಾನವನ್ನು ಬಳಸಿಕೊಂಡು ಆಯ್ಕೆಯಾದ ಗ್ರಾಮದಲ್ಲಿ ಕನಿಷ್ಠ ಒಂದು ಸಾಂಸ್ಕೃತಿಕ ಕೇಂದ್ರದ ಸ್ಥಾಪನೆ. |

ಆದ್ದರಿಂದ ಆಯ್ಕೆಯಾದ ಗ್ರಾಮದಲ್ಲಿ ಮೇಲ್ಕಂಡ ವಿವರಗಳಂತೆ ಶೇ.12 ರಷ್ಟು ಅನುದಾನವನ್ನು ಅಂದರೆ ಒಟ್ಟಾರೆ ಯೋಜನೆಯಡಿ ಲಭ್ಯವಾಗುವ ರೂ. 9.00 ಲಕ್ಷಗಳನ್ನು ಉಪಯೋಗಿಸಿಕೊಂಡು ಕೈಗೊಳ್ಳಲಾಗುವ ಗ್ರಂಥಾಲಯ / ಸಾಹಿತಿ ಕಲಾವಿಧರ ಸ್ಮಾರಕ / ಸಭಾಭವನ / ಬಯಲು ರಂಗಮಂದಿರ ಮುಂತಾದ ಸಾಂಸ್ಕೃತಿಕ ಕೇಂದ್ರಗಳನ್ನು ನಿರ್ಮಿಸಿ ಪೂರ್ಣಗೊಂಡ ನಂತರ ಸ್ಥಳೀಯ

ಸಾಹಿತಿ / ಗಣ್ಯ ವ್ಯಕ್ತಿಯ ಹೆಸರನ್ನು ಇತ್ಯರ್ಥಪಡಿಸಲು ಶಾಸಕರ ಅಧ್ಯಕ್ಷತೆಯಲ್ಲಿರುವ ಯೋಜನಾ ಉಸ್ತುವಾರಿ ಸಮಿತಿಯು ಹೆಸರನ್ನು ಅಂತಿಮಗೊಳಿಸಿ ಸದರಿ ಹೆಸರನ್ನು ನಿರ್ಮಾಣಗೊಂಡ ಸಾಂಸ್ಕೃತಿಕ ಕೇಂದ್ರ / ಕಟ್ಟಡಗಳಿಗೆ ನಾಮಕರಣ ಮಾಡಲು ಸಂಬಂಧಪಟ್ಟ ಗ್ರಾಮ ಪಂಚಾಯತ್‌ಗಳಿಗೆ ಅವಕಾಶ ಕಲ್ಪಿಸಿದೆ ಮತ್ತು ಯೋಜನೆ ಅನುಷ್ಠಾನಗೊಳಿಸುವಾಗ ಇತರ ಮಾರ್ಗಸೂಚಿಯನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿದೆ.

(ಬೂವನಹಳ್ಳಿನಾಗರಾಜ್)
ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಯನ್ನು ಕ್ರಮಕ್ಕಾಗಿ.**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಮುಖ್ಯ ಇಂಜಿನಿಯರ್, ಪಂ ರಾಜ್ ಇಂಜಿನಿಯರಿಂಗ್ ವಿಭಾಗ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
4. ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು (ಸಂಬಂಧಪಟ್ಟ ಗ್ರಾಮ ಪಂಚಾಯಿತಿಯ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿಯ ಅಧಿಕಾರಿಗಳು / ಕಾರ್ಯದರ್ಶಿ ಗೆ ಪ್ರತಿಯನ್ನು ಮಾಹಿತಿಗೆ ತಲುಪಿಸುವುದು)
5. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.
6. ವೆಬ್‌ಸೈಟ್/ಮಾಹಿತಿಕೇಂದ್ರ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ ವೆಬ್‌ಸೈಟ್‌ನಲ್ಲಿ ಅಳವಡಿಸಲು.

**ಪ್ರತಿಯನ್ನು ಮಾಹಿತಿಗಾಗಿ.**

1. ಮಹಾಲೇಖಪಾಲರು (ಆಡಿಟ್– I & II), ಬೆಂಗಳೂರು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ಗಳ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ.& ಪಂ.ರಾಜ್ ಇಲಾಖೆ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಆರ್ಥಿಕ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಮತ್ತು ಯೋಜನಾ ಇಲಾಖೆ.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ ಮತ್ತು ಪಂ ರಾಜ್ ಇಲಾಖೆ.
6. ರಕ್ಷ ಕಡತಕ್ಕೆ / ಹೆಚ್ಚುವರಿ ಪ್ರತಿ.